[redacted]



# ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಮುಂಗಡ ತೆರಿಗೆ ಮತುU ITR-U ಫೈಲಿಂಗ್‌ಗೆ ಮೌಲ್ಯಯುತವಾದ ಜಾಗೃತಿ ಕಾರ್ಯಕ್ರಮ




ಬಳ್ಳಾರಿ ಮಾ -ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಭಾಂಗಣದಲ್ಲಿ ಮುಂಗಡ ತೆರಿಗೆ ಮತ್ತು ಋಖಿಖ-ಗ ಫೈಲಿಂಗ್‌ಗೆ ಮೌಲ್ಯಯು ತವಾದ ಜಾಗೃತಿ ಕಾರ್ಯಕ್ರಮ ನಡೆಯಿತು .ಸಂಸ್ಥೆಯ ಅಧ್ಯಕ್ಷರಾದ .ಮಹಾರುದ್ರಗೌಡ ಬಂದಂತಹ ಮುಖ್ಯ ಅತಿಥಿಗಳನ್ನು ಸ್ವಾಗತಸಿ ದರು,ಸಂಸ್ಥೆಯ ಹಿರಿಯ ಉಪಾಧ್ಯಕ್ಷರಾದ ಯಶವಂತರಾಜ್ ನಾಗಿರೆಡ್ಡಿ ರವರು ಪಾಸ್ತಾವಿಕವಾಗಿ ಮಾತನಾಡುತ್ತಾ, ಐಟಿಆರ್ ಫೈಲಿಂಗ್ ಎನ್ನುವುದು ತೆರಿಗೆದಾರನು ತನ್ನ ಆರ್ಥಿಕ ವರ್ಷದಲ್ಲಿ ಗಳಿಸಿದ ಒಟ್ಟು ಆದಾಯದ ವರದಿಯನ್ನು ಸಲ್ಲಿಸುವ ಪ್ರಕ್ರಿಯೆಯಾಗಿದೆ. ಆದಾಯ ತೆರಿಗೆ ಇಲಾಖೆಯ ಅಧಿಕೃತ ಪೋರ್ಟಲ್ ಮೂಲಕ, ಒಬ್ಬ ವ್ಯಕ್ತಿಯು ತಮ್ಮ ರಿಟರ್ನ್ಸ್ ಫೈಲಿಂಗ್ ಅನ್ನು ಪೂರ್ಣಗೊಳಿಸಬಹುದು ಇದರ ಬಗ್ಗೆ ಸಂಪೂರ್ಣವಾದ ಮಾಹಿತಿ ನೀಡಲು ಅಧಿಕಾರಿಗಳು ಬಂದಿದ್ದಾರೆ ಎಂದು ಸಭೆಗೆ ತಿಳಿಸಿದರು.ಮಲ್ಲಿಕಾರ್ಜುನ ಗೌಡ ಆದಾಯ ತೆರಿಗೆ ಅಧಿಕಾರಿ, ಇವರು ಮಾತನಾಡುತ್ತಾ,ಐಟಿಆರ್ ನಿವ್ವಳ ತೆರಿಗೆ ಹೊಣೆಗಾರಿಕೆಯನ್ನು ಘೋಷಿಸಲು, ತೆರಿಗೆ ವಿನಾಯಿತಿಗಳ ಕ್ಲೈಮ್ ಮಾಡಲು ಮತ್ತು ಒಟ್ಟು ತೆರಿಗೆಯ ಆದಾಯವನ್ನು ವರದಿ ಮಾಡಲು ಬಳಸಲಾಗುವ ಒಂದು ರೂಪವಾಗಿದೆ. ನಿರ್ದಿಷ್ಟ ಪ್ರಮಾಣದ ಹಣವನ್ನು ಗಳಿಸುವ ವ್ಯಕ್ತಿಗಳು ಐಟಿ ರಿಟರ್ನ್ಸ್‌ಬಖಪ್ಪ ನ್ನು ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಮುಂಗಡ ತೆರಿಗೆಯನ್ನು ಯಾರು ಪಾವತಿಸಬೇಕು? ಸಂಬಳ ಪಡೆಯುವ ವ್ಯಕ್ತಿಗಳು, ಸ್ವತಂತ್ರೋದ್ಯೋಗಿಗಳು ಮತ್ತು ವ್ಯವಹಾರಗಳು- ಒಂದು ಹಣಕಾಸು ವರ್ಷದಲ್ಲಿ ನಿಮ್ಮ ಒಟ್ಟು ತೆರಿಗೆ ಹೊಣೆಗಾರಿಕೆ ರೂ 10,000 ಅಥವಾ ಅದಕ್ಕಿಂತ ಹೆಚ್ಚಿದ್ದರೆ, ನೀವು ಮುಂಗಡ ತೆರಿಗೆಯನ್ನು ಪಾವತಿಸಬೇಕಾಗುತ್ತದೆ.ಮುಂಗಡ ತೆರಿಗೆಯು ಎಲ್ಲಾ ತೆರಿಗೆದಾರರು ಸಂಬಳ ಪಡೆಯುವ ವ್ಯಕ್ತಿಗಳು, ಸ್ವತಂತ್ರೋದ್ಯೋಗಿಗಳು ತೆರಿಗೆಯನ್ನು ಪಾವತಿಸಬೇಕಾಗುತ್ತದೆ. ಹಿರಿಯ ನಾಗರಿಕರು ವ್ಯಾಪಾರ ಅಥವಾ ವೃತ್ತಿಯಿಂದ ಯಾವುದೇ ಆದಾಯವನ್ನು ಹೊಂದಿರದ ಹಿರಿಯ ನಾಗರಿಕರಿಗೆ ಮುಂಗಡ ತೆರಿಗೆ ಪಾವತಿಯಿಂದ ವಿನಾಯಿತಿ ಇದೆ ಎಂದು ತಿಳಿಸಿದರು.ಈ ಕಾರ್ಯಕ್ರಮವನ್ನು ಸಿಎ ರಾಜಶೇಖರ ರವರು ನರೂಪಿಸಿದರು.ಸಂಸ್ಥೆಯ ಗೌರವಕಾರ್ಯದರ್ಶಿಗಳಾದ ಕೆ.ಸಿ ಸುರೇಶ ಬಾಬು ವಂದನಾರ್ಪಣೆ ಮಾಡಿದರು.ಈ ಸಂದರ್ಭದಲ್ಲಿ, ಉಪಾಧ್ಯಕ್ಷರ 'ಗಳಾದ ಎಸ್.ದೊಡ್ಡನಗೌಡ, ಸೊಂತಗಿರಿಧರ, ಜಂಟಿಕಾರ್ಯದ 'ರ್ಶಿಗಳಾದ ಡಾ.ಮರ್ಚೆಡ್ ಮಲ್ಲಿಕಾರ್ಜುನಗೌಡ, ವಿ.ರಾಮಚಂದ್ರ, ನಾಗಳ್ಳಿ ರಮೇಶ, ಜಂಟಿ ಖಜಾಂಚಿ, ಸಿ.ಎಸ್.ಸತ್ಯನಾರಾಯಣ, ಸ್ವಾಗತ ಸಮಿತಿ ಚೇರ್ಮನ್, ಟಿ.ಶ್ರೀನವಾಸ ರಾವ್, ಪತ್ರಿಕಾ ಮತ್ತು ಮಾಧ್ಯಮ, ಚೇರ್ಮನ್, ಎಲ್ಲಾ ಪದಾಧಿಕಾರಿಗಳು, ಎಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು, ವಿಶೇಳ ಆಹ್ವಾನತರು, ವಿಶೇಳ ಸಮನ್ವಯ ಸಮಿತಿ ಸದಸ್ಯರು, ವಿವಿಧ-ಸಂಘ ಸಂಸ್ಥೆಗಳ ಪದಾಧಿಕಾರಿಗಳು ಈ ಕಾರ್ಯಕ್ರದಲ್ಲಿ ಉಪಸ್ಥಿತರಿದ್ದರು.

# ಧಾರ್ಮಿಕ ಜೀವಿ ವೀರಣ್ಣ ಕೋಮಲಾಪುರಗೆ ಗೌರವ ಸನ್ಮಾನ



ಕೊಪ್ಪಳ: ಜಿಲ್ಲೆಯ ಗಂಗಾವತಿ ತಾಲೂಕಿನ ಬಸಾಪಟ್ಟಣ ಗ್ರಾಮದಲ್ಲಿ ಕರ್ನಾಟಕ ಚಾಲಕರ ಒಕ್ಕೂಟದ ತಾಲೂಕು ನೂತನ ಘಟಕದ ಉದ್ಘಾಟನೆ ಹಾಗೂ ಚಾಲಕರಿಗೆ ಹೊಸ ಗುರುತಿನ ಚೀಟಿ ವಿತರಣಾ ಸಮಾರಂಭ ಜರುಗಿದ್ದು, ಇದೇವೇಳೆ ಶಹಪುರ ಗ್ರಾಮದ ಧಾರ್ಮಿಕ ಹಾಗೂ ಸಮಾಜ ಸೇವಕರಾದ ವೀರಣ್ಣ ಕೋಮಲಾಪುರ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.ಇದಕ್ಕೂ ಮುನ್ನ ಕರ್ನಾಟಕ ಚಾಲಕರ ಒಕ್ಕೂಟದ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ಜಿ.ನಾರಾಯಣಸ್ವಾಮಿ ಅವರನ್ನು ರ‍್ಯಾಲಿಯ ಮೂಲಕ ಮೆರವಣಿಗೆ ನಡೆಸಿ, ಗ್ರಾಮಸ್ಥರ ಸಮ್ಮುಖದಲ್ಲಿ ಆತ್ಮೀಯವಾಗಿ ಸ್ವಾಗತಿಸಲಾಯಿತು. ಬಳಿಕ ಗ್ರಾಮದಲ್ಲಿ ನಡೆದ ಅದ್ದೂರಿ ಸಮಾರಂಭದಲ್ಲಿ ಚಾಲಕರು ಪ್ರಸಕ್ತ ಸಾಲಿನಲ್ಲಿ ಎದುರಿಸುತ್ತಿರುವ ಸಮಸ್ಯೆಗಳು, ಅವರಿಗೆ ಸಂಚಾರಿ ಪೊಲೀಸರಿಂದ ಆಗುತ್ತಿರುವ ತೊಂದರೆಗಳು, ಕೊರೊನಾ ಬಳಿಕ ಆರ್ಥಿಕವಾಗಿ ಚೇತರಿಸಿಕೊಳ್ಳದೇ, ಜೀವನ ನಿರ್ವಹಣೆ ಸಾಧ್ಯವಾಗದೇ ಸವಾಲುಗಳನ್ನು ಎದುರಿಸುತ್ತಲೇ ಚಾಲಕ ವೃತ್ತಿಯನ್ನು ಮುಂದುವರಿಸುತ್ತಿರುವುದರ ಬಗ್ಗೆ ಒಕ್ಕೂಟದ ರಾಜ್ಯ ಪದಾಧಿಕಾರಿಗಳು ಮಾತನಾಡಿದರು.

ದೀಪಜ್ಯೋತಿ ಬೆಳಗಿದ ರಾಜ್ಯ ಘಟಕದ ಪದಾಧಿಕಾರಿಗಳು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅದರಲ್ಲೂ ಆಡಳಿತ ಯಂತ್ರಾಂಗಕ್ಕೆ ಮತ್ತು ದೈನಂದಿನ ಎಲ್ಲ ಬಗೆಯ ಸೌಲಭ್ಯಗಳನ್ನು ಒದಗಿಸಿಕೊಡುವಲ್ಲಿ ಚಾಲಕರ ಪಾತ್ರ ಬಹುಮುಖ್ಯವಾಗಿದೆ. ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಸಂಚರಿಸುವ ಚಾಲಕರು ಪ್ರಯಾಣಿಕರಿಗಷ್ಟೇ ಅಲ್ಲದೆ, ಜೀವನಾವಶ್ಯಕ ವಸ್ತುಗಳನ್ನು ಸುರಕ್ಷಿತವಾಗಿ ಕೊಂಡೊಯ್ಯುವ ಗುರುತರವಾದ ಕರ್ತವ್ಯ ನಿಭಾಯಿಸುತ್ತಿದ್ದಾರೆ. ಸಮಾಜದಲ್ಲಿ ಚಾಲಕರಿಗೆ ಗೌರವದಿಂದ ನೋಡುವಂತಾಗಲು ಸರ್ಕಾರ ಚಾಲಕರಿಗೂ ಎಲ್ಲ ರೀತಿಯ ಸರ್ಕಾರಿ ಸೌಲಭ್ಯಗಳನ್ನು ನೀಡಬೇಕೆಂದು ಹೇಳಿದರು. ಚಾಲಕರು ಏನೇ ಸಮಸ್ಯೆ ಎದುರಾದರೂ ಸಂಘಟನೆ ಮತ್ತು ಐಕ್ಯತೆಯಿಂದ ಹೋರಾಟ ಮಾಡುವ ಮೂಲಕ ಸರ್ಕಾರ ಹಾಗೂ ಸಮಾಜದ ಕಣ್ಣು ತೆರೆಸಲು ಯಾವುದೇ ಕ್ಷಣದಲ್ಲೂ ಸನ್ನದ್ಧರಾಗುವಂತೆ ಕರೆ ನೀಡಿದರು.ಕರ್ನಾಟಕ ಚಾಲಕರ ಒಕ್ಕೂಟದ ರಾಜ್ಯ ಉಪಾಧ್ಯಕ್ಷ ಎಂ.ಡಿ.ಮಸ್ತಾನ್ ಸಾಬ್, ಕೊಪ್ಪಳ ಜಿಲ್ಲಾ ಘಟಕದ ಅಧ್ಯಕ್ಷ ವೀರಣ್ಣ ಕೋಮಲಾಪುರ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಉಮಾದೇವಿ, ಗಂಗಾವತಿ ತಾಲೂಕು ಘಟಕದ ಅಧ್ಯಕ್ಷ ಮಂಜುನಾಥ ಕಂಬ್ಳಿ, ಉಪಾಧ್ಯಕ್ಷ ಕನಕಪ್ಪ ಕೆಂಗೇರಿ, ಕೊಪ್ಪಳ ತಾಲೂಕು ಘಟಕದ ಅಧ್ಯಕ್ಷ ಶರಣಪ್ಪ ಚೌಡ್ಕಿ, ಪದಾಧಿಕಾರಿಗಳಾದ ತಿರುಪತಿ ಕಂಬ್ಳಿ ಸೇರಿದಂತೆ ರಾಜ್ಯದ 31 ಜಿಲ್ಲೆಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಇದ್ದರು.

# ಸಿ.ಪಿ.ಎಸ್.ಶಾಲೆಗೆ ಮೂಲಭೂತ ಸೌಲಭ್ಯ ಜಿಲ್ಲಾಡಳಿತ ಬದ್ಧವಾಗಿದೆ: ನಳಿನ ಅತುಲ್



ಕೊಪ್ಪಳ: ನಗರದ ಪ್ರದೇಶದಲ್ಲಿ ಅತ್ಯಂತ ಹೆಚ್ಚು ಮಕ್ಕಳನ್ನು ಹೊಂದಿರುವ ಸಿ.ಪಿ.ಎಸ್.ಶಾಲೆಗೆ ಬೇಕಾದ ಮೂಲಭೂತ ಸೌಲಭ್ಯ ಒದಗಿಸಲು ಜಿಲ್ಲಾಡಳಿತ ಬದ್ಧವಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಳಿನ ಅತುಲ್ ಹೇಳಿದರು.

ಅವರು ಶುಕ್ರವಾರ ಸಂಜೆ ನಗರದ ಸಿ.ಪಿ.ಎಸ್.ಶಾಲೆಯಲ್ಲಿ ಪರಿಸರ ಪ್ರೇಮಿತಂಡದವರಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡುತ್ತಾ,ಪ್ರಸ್ತುತ ದಿನಮಾನಗಳಲ್ಲಿ ನಗರದ ಪ್ರದೇಶಗಳಲ್ಲಿ ಖಾಸಗಿ ಶಾಲೆಗಳ ಪೈಪೋಟಿಯಿಂದ ಸರಕಾರಿ ಶಾಲೆಯಲ್ಲಿ ಮಕ್ಕಳ ದಾಖಲಾತಿ ಕಡಿಮೆಯಾಗಿವೆ.

ಇದರ ನಡುವೆಯೂ ಕೂಡಾ ಸಿ.ಪಿ.ಎಸ್.ಶಾಲೆಯು 336 ಮಕ್ಕಳನ್ನು ಹೊಂದಿರುವ ಅತಿ ದೊಡ್ಡ ಶಾಲೆಯಾಗಿದೆ.ಈ ಶಾಲೆಗೆ ಬೇಕಾದ ಮೂಲಭೂತ ಸೌಲಭ್ಯಗಳನ್ನು ಜಿಲ್ಲಾಡಳಿತ ಒದಗಿಸಸಲು ಬದ್ಧವಾಗಿದೆ.ಪರಿಸರ ಪ್ರೇಮಿತಂಡದವರು ಮಾಡುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ.ಇಂತಹ ಕಾರ್ಯಗಳು ಇನ್ನೂ ಹೆಚ್ಚು ಆಗಬೇಕು.ಈ ಕಾರ್ಯದಲ್ಲಿ ನಾನು ಕೂಡಾ ಭಾಗಿಯಾಗಿರುವುದು ಖುಷಿ ತಂದಿದೆ ಎಂದರು.

ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಾದ ಯಶೋಧ ವಂಟಗೋಡಿ ಅವರು ಮಾತನಾಡಿ,ಪರಿಸರ ಪ್ರೇಮಿತಂಡವು ಕೇವಲ ಶಾಲೆಗಳಿಗೆ ಬಣ್ಣ ಹಚ್ಚುವ ಕೆಲಸ ಅಷ್ಟೇ ಅಲ್ಲ ಗಿಡಗಳನ್ನು ಹಚ್ಚುವುದರ ಮೂಲಕ ಪರಿಸರ ಕಾಳಜಿ ಮಾಡುತ್ತಿದ್ದಾರೆ. ಇವರು ಮಾಡುತ್ತಿರುವ ಕಾರ್ಯ ಮಾದರಿಯಾಗಿದೆ.ಈ ಕಾರ್ಯ ಇದೇ ರೀತಿಯಲ್ಲಿ ಮುಂದುವರೆಯುಲಿ ಎಂದು ಹೇಳೀದರು.ಜಿಲ್ಲಾ ಪಂಚಾಯತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಮಾತನಾಡುತ್ತಾ, ಶಾಲೆಯಲ್ಲಿ ಅಭ್ಯಾಸ ಮಾಡಿದ ಮಕ್ಕಳು ಮುಂದೆ ಉನ್ನತವಾದ ಹುದ್ದೆಯನ್ನು ಅಲಂಕರಿಸಿದಾಗ ತಾನು ಕಲಿತ ಶಾಲಾ ಅಭಿವೃದ್ದಿಗೆ ತನ್ನದೆಯಾದ ಕೊಡುಗೆಯನ್ನು ನೀಡಬೇಕು.ಶಾಲಾ ವಾತಾರವರಣದಲ್ಲಿ ಮಕ್ಕಳಿಗೆ ಪರಿಸರದ ಮಹತ್ವದ ಬಗ್ಗೆ ತಿಳಿಸಬೇಕು.

ಪರಿಸರ ಪ್ರೇಮಿತಂಡ 25ನೇ ವಾರಗಳನ್ನು ಪೂರೈಸುತ್ತಿರುವುದು ಮೆಚ್ಚುಗೆಯ ಕೆಲಸ ಎಂದು ಹೇಳಿದರು.ವಿಕಲಚೇತನ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಬೀರಪ್ಪ ಅಂಡಗಿ ಮಾತನಾಡುತ್ತಾ,ಸಿ.ಪಿ.ಎಸ್.ಶಾಲೆಯ ಅಭಿವೃದ್ದಿಗಾಗಿ ಸರಕಾರದ ಸಹಾಯವಿಲ್ಲದೇ ಶಿಕ್ಷಕರು ಹಾಗೂ ಹಳೆಯ ವಿದ್ಯಾರ್ಥಿಗಳು ಜೊತೆಯಲ್ಲಿ ದಾನಿಗಳ ಸಹಾಯದಿಂದ ಅಭಿವೃದ್ದಿ ಮಾಡಲಾಗುತ್ತಿದೆ.ಮುಖ್ಯವಾಗಿ ನಮ್ಮ ಶಾಲೆಗೆ ಶೌಚಾಲಯದ ಅಗತ್ಯ ಬಹಳ ಇದೇ ಅದನ್ನು ಒದಗಿಸುವುದರ ಜೊತೆಯಲ್ಲಿ ನಮ್ಮ ಶಾಲಾ ಕಟ್ಟಡವು ಬೇರೆ ಇಲಾಖೆಯ ಅಧಿನದಲ್ಲಿದ್ದು,ಅದನ್ನು ನಮ್ಮ ಇಲಾಖೆಗೆ ವರ್ಗಾಯಿಸಿ ಕೊಡುವಂತೆ ಮನವಿ ಮಾಡಿದರು.

ಈ ಸಮಯದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಕಡಿ,ಉಪ ವಿಭಾಗಾಧಿಕಾರಿ ಮಹೇಶ ಮಾಲಗಿತ್ತಿ,ಪರಿಸರ ಪ್ರೇಮಿ ತಂಡ ನಾಯಕರಾದ ಮಲ್ಲಿಕಾರ್ಜುನ ತೊದಲಬಾಗಿ,ನಗರಸಭೆಯ ಸದಸ್ಯ ರಾದ ರಾಜಶೇಖರ ಆಡೂರು,ದೈಹಿಕ ಶಿಕ್ಷಣಾಧಿಕಾರಿ ಬಸವರಾಜ.ಕ್ಷೇತ್ರ ಸಮನ್ವಯಾಧಿಕಾರಿ ಪ್ರಕಾಶ ತಗಡಿನಮನ,ಶಾಲೆಯ ಮುಖ್ಯೋಪಾಧ್ಯಾಯರಾದ ಎಂ.ಡಿ.ಗುಲಾಮ ಹುಸೇನ ಮುಂತಾದವರು ಹಾಜರಿದ್ದರು. ಕಾರ್ಯಕ್ರಮವನ್ನು ಸಿ.ಆರ್.ಪಿ.ಹನುಮಂತಪ್ಪ ಕುರಿ ನರೂಪಿಸಿದರು. ಶಾಲೆಯ ಶಿಕ್ಷಕಿ ಶೀಲಾ ಬಂಡಿ ಪ್ರಾರ್ಥನೆ ನೇರವೇರಿಸಿದರು. ಶಿಕ್ಷಕರಾದ ಮಲ್ಲಿಕಾರ್ಜುನ ಸ್ವಾಗತಿಸಿ,ವಿರುಪಾಕ್ಷಪ್ಪ ಬಾಗೋಡಿ ವಂದಸಿರು.

# ಎಲೆಕ್ಟ್ರಾನಿಕ್ & ಡಿಜಿಟೆಲ್ ಮಾಧ್ಯಮದಲ್ಲಿ ಉದ್ದಿಮೆ ಸ್ಥಾಪನೆಗೆ ಸಹಾಯಧನ: ಅರ್ಜಿ ಆಹ್ವಾನ

ಕೊಪ್ಪಳ, ಮಾರ್ಚ್ : ಕರ್ನಾಟಕ ಮಹರ್ಷಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದ ಪರಿಶಿಷ್ಟ ಪಂಗಡಗಳ ಸಮುದಾಯದ ನಿರುದ್ಯೋಗಿ ಯುವಕ ಯುವತಿರಿಗೆ ಎಲೆಕ್ಟ್ರಾನಿಕ್ ಮತ್ತು ಡಿಜಿಟೆಲ್ ಮಾಧ್ಯಮದಲ್ಲಿ ಉದ್ದಿಮೆಯನ್ನು ಸ್ಥಾಪಿಸಲು ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಎಲೆಕ್ಟ್ರಾನಿಕ್ ಮತ್ತು ಡಿಜಿಟೆಲ್ ಮಾಧ್ಯಮಗಳಾದ ಯ್ಯೂಟುಬ್ ಚಾನೆಲ್, ಸೋಶಿಯಲ್ ಮಿಡಿಯಾ ನ್ಯೂಸ್ ಪೇಜ್ಸ್, ನ್ಯೂಸ್ ಆನ್‌ಲೈನ್ ಬ್ಲಾಗ್, ನ್ಯೂಸ್ ಕನ್‌ಟೆಂಟ್ ಕ್ರಿಯೆಷನ್, ಆನ್‌ಲೈನ್ ನ್ಯೂಸ್, ಆನ್‌ಲೈನ್ ಬ್ಲಾಗ್, ವೆಬ್ ಪೇಜ್ಸ್, ಆನ್‌ಲೈನ್ ಜರ್ನಲಿಸಂ, ಮೀಡಿಯಾ ರಿಲೆಟೆಡ್ ಟ್ರೈನಂಗ್ ಕಾರ್ಯಕ್ರಮಗಳಡಿ ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಉದ್ದಿಮೆಯನ್ನು ಸ್ಥಾಪಿಸಲು ಸಹಾಯಧನವನ್ನು ಪಡೆಯಲು ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದ ಪರಿಶಿಷ್ಟ ಪಂಗಡಗಳ ಸಮುದಾಯದ ನಿರುದ್ಯೋಗಿ ಯುವಕ ಯುವತಿಯರು ಅರ್ಜಿಯನ್ನು ಆಫ್‌ಲೈನ್ ಮೂಲಕ ಮಾರ್ಚ್ 30ರೊಳಗಾಗಿ ಜಿಲ್ಲಾ ವ್ಯವಸ್ಥಾಪಕರ ಕಾರ್ಯಾಲಯ ಕರ್ನಾಟಕ ಮಹರ್ಷಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಜಿಲ್ಲಾ ಆಡಳಿತ ಭವನ 2ನೇ ಮಹಡಿ ರೂ.ನಂ-109 ಕೊಪ್ಪಳ, ಈ ಕಚೇರಿಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಿಗಮದ ಜಿಲ್ಲಾ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೊರಗುತ್ತಿಗೆ ಸಿಬ್ಬಂದಿಗೆ ಕಾಲಕಾಲಕ್ಕೆ ವೇತನ ಪಾವತಿಸಿ: ಸಿಇಒ ರಾಹುಲ್ ಶಿಂಧೆ

ಬೆಳಗಾವಿ: ಹೊರಗುತ್ತಿಗೆ ಸಿಬ್ಬಂದಿಯನ್ನು ಅವರ ಕಾರ್ಯ ವೈಖರಿ ಆಧಾರದ ಮೇಲೆ ಮುಂದುವರಿಸುವುದು. ಅವರಿಗೆ ಸರಿಯಾದ ವೇಳೆಗೆ ವೇತನ ಪಾವತಿಸಲು ಕ್ರಮಕೈಗೊಳ್ಳಬೇಕು ಎಂದು ಜಿಪಂ ಸಿಇಒ ರಾಹುಲ್ ಶಿಂಧೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಶನಿವಾರ (ಮಾ.16) ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯುಲ್ಲಿ ಹೆಚ್ಚು ಹೆರಿಗೆಗಳು ದಾಖಲಾಗುವ ಆಸ್ಪತ್ರೆಗಳಲ್ಲಿ ಕೆಲವೊಂದು ಬಾರಿ ತಾಯಿ ಅವಶ್ಯವಿರುವ ರಕ್ತ ಒದಗಿಸಲು ರಕ್ತ ಸಂಗ್ರಹ ಘಟಕ ಸ್ಥಾಪಿಸಬೇಕು. ಈ ನಿಟ್ಟಿನಲ್ಲಿ ನಿಯಮಾನುಸಾರ ಕ್ರಮಕೈಗೊಳ್ಳಲು ವರದಿ ಸಲ್ಲಿಸಬೇಕು ಎಂದು ನಿರ್ದೇಶನ ನೀಡಿದರು.

ಲಸಿಕಾ ಅಧಿಕಾರಿ ಡಾ.ಚೇತನ್ ಕಂಕನವಾಡಿ ಮಾತನಾಡಿ, ಈಚೆಗೆ ಜರುಗಿದ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ ಜಿಲ್ಲೆಯೂ ಶೇ.100 ರಷ್ಟು ಪ್ರಗತಿ ಸಾಧಿಸಿದೆ ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಡಾ.ಮಹೇಶ್ ಕೋಣಿ, ಅಪರ ಜಿಲ್ಲಾ ಆರೋಗ್ಯ ಅಧಿಕಾರಿ ಎಸ್.ಎಸ್. ಗಡೇದ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

# ಗೋಕಾಕ:ಲೋಕಸಭಾ ಚುನಾವಣೆ ಘೋಷಣೆ-ಚೆಕ್ ಪೋಸ್ಟನಲ್ಲಿ ಬಿಗಿ ತಪಾಸಣೆ



ಗೋಕಾಕ : 2024ರ ಲೋಕ ಸಭಾ ಚುನಾವಣೆ ಘೋಷಣೆ ಆಗುತ್ತಿದ್ದಂತೆಯೇ ಗೋಕಾಕ ತಾಲೂಕಿನ ಕೊಣ್ಣೂರ ಚೆಕ್ ಪೋಸ್ಟ್ ಮುಖಾಂತರ ಹಾಯ್ದು ಹೋಗುವ ವಾಹನಗಳ ತಪಾಸಣೆಯು ಬಿಗಿಯಾಗತೊಡಗಿದೆ.

ಗೋಕಾಕ ಗ್ರಾಮೀಣ ಪಿ,ಎಸ್,ಐ, ಶರಣಬಸಪ್ಪ ಸಂಗಳದ, ಎಸ್,ಎಸ್,ಮಾಳೆಗಾಂವ, ಹಾಗೂ ಕಂದಾಯ ಅಧಿಕಾರಿಗಳು ಡಿವೈಎಸ್ಪಿ ಹಾಗೂ ಸಿಪಿಐ ಇವರ ಮಾರ್ಗದರ್ಶನದಲ್ಲಿ ಗ್ರಾಮೀಣ ಪೊಲೀಸರು,ಹಾಗೂ ತಾಲೂಕಾಡಳಿತದಿಂದ ನಿಯೋಜಿಸಲಾದ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದು ಕೊಣ್ಣೂರ ಚೆಕ್ ಪೋಸ್ಟ್ ಮುಖಾಂತರ ತಾಲೂಕಿಗೆ ಪ್ರವೇಶವಾಗುವ ವಾಹನಗಳನ್ನು ಪರಿಶೀಲಿಸುವಲ್ಲಿ ಕಾರ್ಯದಲ್ಲಿ ನಿರತರಾಗಿದ್ದಾರೆ.ಈ ಸಂದರ್ಭದಲ್ಲಿ ಎ,ಎಸ್,ಐ, ದಳವಾಯಿ ಸೇರಿದಂತೆ ಇನ್ನುಳಿದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ರೈತರಿಗಾಗಿ ಮೀಸಲಿರುವ ಕೇಂದ್ರ ಸರ್ಕಾರದ ಯೋಜನೆಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಿ:ಸಚಿವೆ ಶೋಭಾ ಕರಂದ್ಲಾಜೆ



ವಿಜಯಪುರ, ಮಾ.-: ರೈತರು ಬೆಳೆದ ಬೆಳೆಗಳನ್ನು ಸಂಸ್ಕರಿಸಿ ಮೌಲ್ಯವರ್ಧನೆಗೊಳಿಸಿ ವಿವಿಧ ಆಹಾರ ಉತ್ಪನ್ನಗಳನ್ನು ತಯಾರಿಸಿ ವ್ಯಾಪಾರಕ್ಕೆ ಉತ್ತೇಜನ ನೀಡಿದರೆ ಆದಾಯ ದ್ವಿಗುಣವಾಗುವಾದರೊಂದಿಗೆ ರೈತರ ಬದುಕು ಹಸನಾಗುತ್ತದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಅನೇಕ ಯೋಜನೆಗಳನ್ನು ರೈತರಿಗಾಗಿ ಮೀಸಲಿಟ್ಟಿದೆ ಇದರ ಸದುಪಯೋಗ ರೈತರು ಪಡೆದುಕೊಳ್ಳಬೇಕು ಎಂದು ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆಯ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು.

ವಿಜಯಪುರ ಹೊರವಲಯ ಹಿಟ್ಟಿನಹಳ್ಳಿಯಲ್ಲಿರುವ ಕೃಷಿ ಮಹಾವಿದ್ಯಾಲಯ ಆವರಣದಲ್ಲಿ 85 ಲಕ್ಷ ರೂಪಾಯಿ ಅನುದಾನದ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ರೈತರ ವಸತಿ ನಿಲಯ ಕಟ್ಟಡದ ಉದ್ಘಾಟನೆ ಯನ್ನು ನೇರವೇರಿಸಿ ಅವರು ಮಾತನಾಡಿದರು.ಕೃಷಿ ವಿಜ್ಞಾನ ಕೇಂದ್ರಗಳು ರೈತರಿಗೆ ದೇವಸ್ಥಾನವಿದ್ದಂತೆ. ಇಲ್ಲಿ ಅನೇಕ ಮಾಹಿತಿಗಳು ದೊರೆಯುತ್ತವೆ. ಸರ್ಕಾರ ರೈತರಿಗೆ ನೀಡುವ ಸಹಾಯಧನ, ಬೆಳೆಗಳ ಬಗ್ಗೆ ಮಾಹಿತಿ, ರೋಗ ನಿರ್ವಹಣೆಗಳ ಕುರಿತು ಅನುಸರಿಸಬೇಕಾದ ವೈಜ್ಞಾನಿಕ ನಿರ್ವಹಣೆ, ಆಹಾರ ಸಂಸ್ಕರಣೆಯ ಮಾಹಿತಿ, ಹೊಸ ತಂತ್ರಜ್ಞಾನಗಳ ಬಗ್ಗೆ ಮಾಹಿತಿ, ಅನೇಕ ತರಬೇತಿಗಳನ್ನು ನೀಡಲಾಗುತ್ತದೆ. ಇದನ್ನು ರೈತರು ಪಡೆದುಕೊಂಡು ಆದಾಯ ದ್ವಿಗುಣವಾಗುವತ್ತ ಹೆಜ್ಜೆ ಹಾಕಬೇಕು ಎಂದರು.

ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಜಿಲ್ಲಾ ಪಂಚಾಯತ್ ಹಾಗೂ ಸ್ಥಳೀಯ ಆಡಳಿತದ ಸಮನ್ವಯದಿಂದ ರೈತರ ಬದುಕು ಹಸನು ಮಾಡಲು ಅನೇಕ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಟೆಕ್ನಾಲಜಿಯ ಮೂಲಕ ಕೃಷಿಗೆ ಉತ್ತೇಜನ ನೀಡಿ ಸುಸ್ಥಿರ ಕೃಷಿ ಮಾಡುವಂತೆ ಪ್ರೋತ್ಸಾಹ ನೀಡಲಾಗಿದೆ ಎಂದು ತಿಳಿಸಿದರು.

ವಿಜಯಪುರ ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ಜಿಲ್ಲೆಯು ಹಣ್ಣಿನ ಬೆಳೆ ಬೆಳೆಯಲು ಅನೇಕ ಅನುಕೂಲಗಳನ್ನು ಹೊಂದಿದೆ. ಜಿಲ್ಲೆಯ ನೆಲ, ಬಿಸಿಲು, ನೀರು ಬೆಳೆಗಳು ಬೆಳೆಯಲು ಪೂರಕವಾಗಿದೆ. ರೈತರು ಬೆಳೆದ ಉತ್ಪನ್ನಗಳಿಗೆ ಸೂಕ್ತ ದರ ಹಾಗೂ ಮಾರುಕಟ್ಟೆ ವ್ಯವಸ್ಥೆ ಮಾಡಬೇಕಾಗಿದೆ ಎಂದರು.

ನಾಗಠಾಣ ಶಾಸಕ ವಿಠ್ಠಲ ಧೋಂಡಿಬಾ ಕಟಕದೊಂಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ. ಪಿ.ಎಲ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ವೇಳೆ ಎಸ್ಸಿಪಿ, ಎಸ್ಟಿಪಿ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಪೆಟ್ರೋಲ್ ಚಾಲಿತ ಸಿಂಪರಣೆ ಯಂತ್ರಗಳನ್ನು ವಿತರಿಸಲಾಯಿತು. ಅಣಬೆಯ ಮೌಲ್ಯವರ್ಧನೆ ಉತ್ಪನ್ನಗಳ ಹಾಗು ಕೃಷಿ ಪ್ರಕಟಣೆಗಳನ್ನು ಬಿಡುಗಡೆಗೊಳಿಸಲಾಯಿತು.

ವೇದಿಕೆ ಮೇಲೆ ಐಸಿಎಆರ್ ಕೃಷಿ ತಂತ್ರಜ್ಞಾನ ಅನ್ವಯಿಕ ಸಂಸೋಧನ ಸಂಸ್ಥೆ ಬೆಂಗಳೂರಿನ ನಿರ್ದೇಶಕರಾದ ಡಾ. ವಿ. ವೆಂಕಟ ಸುಬ್ರಮಣಿಯನ್, ಕೃಷಿ ವಿಶ್ವವಿದ್ಯಾಲಯ ವ್ಯವಸ್ಥಾಪನ ಮಂಡಳಿ ಸದಸ್ಯರಾದ ಜಯಕುಮಾರ ಹೆಚ್, ಶ್ರೀನಿವಾಸ್ ಕೋಟ್ಯಾನ್, ಕೃಷಿ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ.ಎಸ್.ಎಸ್. ಅಂಗಡಿ, ವಿದ್ಯಾಧಿಕಾರಿ ಡಾ. ಭಿಮಪ್ಪ. ಎ, ಸಹ ವಿಸ್ತರಣಾ ನಿರ್ದೇಶಕರಾದ ಡಾ. ಆರ್. ಬಿ. ಬೆಳ್ಳಿ ಉಪಸ್ತಿತರಿದ್ದರು.

# ತ್ವರಿತವಾಗಿ ಎಂ ಎಸ್ ಪಿ ಯೋಜನೆಯಡಿ ಜೋಳ, ರಾಗಿ ಮತ್ತು ಭತ್ತವನ್ನು ಖರಿಧಿಸಲು ಆಗ್ರಹಿಸಿ ಎ ಐ ಕೆ ಕೆ ಎಂ ಎಸ್ ಪ್ರತಿಭಟನೆ




ಬಳ್ಳಾರಿ ಮಾ-:ಎ ಐ ಕೆ ಕೆ ಎಂ ಎಸ್ ರೈತ ಸಂಘಟನೆಯ ಜಿಲ್ಲಾ ಸಮಿತಿ ವತಿಯಿಂದ ಎಂ ಎಸ್ ಪಿ ಯೋಜನೆಯಡಿ ಜೋಳ, ರಾಗಿ ಮತ್ತು ಭತ್ತವನ್ನು ಕೂಡಲೇ ಖರಿಧಿಸಲು ಆಗ್ರಹಿಸಿ ಪ್ರತಿಭಟನೆ ಮಾಡಿ ಗ್ರೇಡ್ 1 ತಹಶೀಲ್ದಾರರಾದ ಗೌಸಿಯಾ ಬೇಗಂ ಅವರ ಮೂಲಕ ಮಾನ್ಯ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಅಧ್ಯಕ್ಷರಾದ ಗೋವಿಂದ್ ಮಾತನಾಡುತ್ತಾ ರಾಜ್ಯದಲ್ಲಿ ಕನಿಷ್ಠ ಬೆಂಬಲ ಬೆಲೆ (ಎಂ ಎಸ್ ಪಿ) ಯೋಜನೆಯಡಿ ರೈತರಿಂದ ಭತ್ತ ರಾಗಿ ಮತ್ತು ಜೋಳ ಖರೀದಿಸುವ ಪ್ರಕ್ರಿಯೆಯ ಗಡವು ಮುಗಿಯಲು ಕೇವಲ 15 ದಿನಗಳು ಬಾಕಿ ಉಳಿದಿದ್ದು, ಇದುವರೆಗೂ ರಾಜ್ಯದಲ್ಲಿ ಖರೀಧಿಯೇ ಇನ್ನೂ ಆರಂಭವಾಗಿಲ್ಲ, ಇದರಿಂದ ಲಕ್ಷಾಂತರ ರೈತರು ಕಂಗಾಲಾಗಿದ್ದಾರೆ.ಈ ಬಾರಿ ರಾಜ್ಯದಲ್ಲಿ ಎಂ ಎಸ್ ಪಿ ಯೋಜನೆ ಅಡಿಯಲ್ಲಿ 5.99 ಲಕ್ಷ ಟನ್ ರಾಗಿ, 2.5 ಲಕ್ಷ ಟನ್ ಭತ್ತ ಮತ್ತು 3 ಲಕ್ಷ ಟನ್ ಬಿಳಿ ಜೋಳ ಖರೀದಿಗೆ 2023ರ ನವಂಬರ್ ನಲ್ಲಿ ಒಪ್ಪಿಗೆ ನೀಡಲಾಗಿತ್ತು.

ರೈತರ ನೋಂದಣಿ ಮತ್ತು ಏಕೀಕೃತ ಫಲಾನುಭವಿಗಳ ಮಾಹಿತಿ ವ್ಯವಸ್ಥೆಯಲ್ಲಿ ಅಡಿಯಲ್ಲಿ ಡಿಸೆಂಬರ್ 1 ರಿಂದ 31 ರವರೆಗೆ ನೊಂದಣಿ ಪ್ರಕ್ರಿಯೆ ನಡೆದಿತ್ತು.2024 ಜನವರಿ ಒಂದರಿಂದ ರಾಜ್ಯಾದ್ಯಂತ ಭತ್ತ ರಾಗಿ ಮತ್ತು ಬಿಳಿ ಜೋಳದ ಖರೀದಿ ಪ್ರಕ್ರಿಯೆ ಆರಂಭವಾಗಬೇಕಿತ್ತು. ಕೇಂದ್ರ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆ ಮಾರ್ಗಸೂಚಿಗಳ ಪ್ರಕಾರ ಎಂ ಎಸ್ ಪಿ ಯೋಜನೆಯಡಿ ಆಹಾರ ಧಾನ್ಯಗಳ ಖರೀಧಿ ಪ್ರಕ್ರಿಯೆ ಮಾರ್ಚ್ 31ಕ್ಕೆ ಮುಕ್ತಾಯವಾಗಲಿದೆ. ಗಡುವು ಮುಗಿಯಲು ಇನ್ನು ಬರೀ 15 ದಿನಗಳಷ್ಟೇ ಬಾಕಿ ಇದೆ, ಆದರೂ ಸಹ ಇನ್ನೂ ಖರಿಧಿಯೇ ಆರಂಭವಾಗಿಲ್ಲ , ಇದೊಂದು ಶೋಚನೀಯ ಪರಿಸ್ಥಿತಿಯಾಗಿದೆ ಎಂದರು.

ಪ್ರತಿಭಟನೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾರ್ಯದರ್ಶಿ ಗುರಳ್ಳಿ ರಾಜ ಮಾತನಾಡುತ್ತಾ ರಾಜ್ಯದ ಎಲ್ಲಾ ಜಿಲ್ಲೆಗಳ ವಿವಿಧ ಸ್ಥಳಗಳಲ್ಲಿ ಡಿಸೆಂಬರ್ ಒಂದರಿಂದಲೇ ಖರಿಧಿ ಕೇಂದ್ರಗಳನ್ನು ತೆರೆದು ರೈತರ ದತ್ತಾಂಶದ ಆಧಾರದಲ್ಲಿ ಭತ್ತ ರಾಗಿ ಮತ್ತು ಬಿಳಿ ಜೋಳದ ಖರೀದಿಗೆ ನೋಂದಣಿಯನ್ನು ಮಾಡಿಕೊಳ್ಳಲಾಗಿದೆ, ಆದರೆ ಜನವರಿ ಒಂದರಿಂದ ಈವರೆಗೆ ಖರೀದಿಗೆ ಚಾಲನೆಯೇ ನೀಡದಿರುವುದು ಆತಂಕ ಹುಟ್ಟಿಸುವಂತಹ ನಡೆಯಾಗಿದೆ.

ಎಂ ಎಸ್ ಪಿ ಯೋಜನೆ ಅಡಿಯಲ್ಲಿ ಆಹಾರ ಧಾನ್ಯ ಮಾರಾಟ ಮಾಡಬೇಕೆಂದು ನೋಂದಣಿ ಮಾಡಿಸಿಕೊಂಡಿರುವ ರೈತರು ಖರೀದಿ ಆರಂಭವಾಗದೆ ಇರುವುದರಿಂದ ಸಂಕಷ್ಟಕ್ಕೆ ಸಿಲುಕಿದ್ದಾರೆ. ಪದೇಪದೇ ಖರೀದಿ ಕೇಂದ್ರಗಳಿಗೆ ಹೋದರು ಮಾಹಿತಿ ಸಿಗುತ್ತಿಲ್ಲ, ಮಾರುಕಟ್ಟೆಯಲ್ಲಿ ಒಳ್ಳೆಯ ದರ ಇದ್ದರೂ ಸಹ ಬಹುತೇಕ ರೈತರು ತಮ್ಮ ಬೆಳೆಗಳನ್ನು ಮಾರಾಟ ಮಾಡಿಲ್ಲ, ಮಾರ್ಚ್ 31ಕ್ಕೆ ಗಡುವು ಮುಗಿಯುವುದರೊಳಗೆ ಖರೀದಿ ಆಗದಿದ್ದರೆ ಇವರ ಗತಿ ಏನು ಎಂಬುದು ಹಲವರ ಆತಂಕದ ಪ್ರಶ್ನೆಯಾಗಿದೆ.ಸರ್ಕಾರ ಕೂಡಲೇ ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ, ಇಂದಿನಿಂದಲೇ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭ ಮಾಡಬೇಕೆಂದು ಹೇಳಿದರು.ಈ ಸಂದರ್ಭದಲ್ಲಿ ಕುರುಗೋಡು ತಾಲೂಕು ಅಧ್ಯಕ್ಷರಾದ ಲಿಂಗಪ್ಪ, ಬಳ್ಳಾರಿ ತಾಲೂಕು ಕಾರ್ಯದರ್ಶಿ ಧನರಾಜ್, ಜಿಲ್ಲಾ ಸಮಿತಿ ಸದಸ್ಯರಾದ ಹೊನ್ನೂರಪ್ಪ ದಸ್ತಗಿರಿ, ರಾಮಕೃಷ್ಣ , ಸೇರಿದಂತೆ ಇತರರು ಇದ್ದರು.